# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** **2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-109ರ ಘೋಷಣೆಯಂತೆ ಮಧ್ಯಾಹ್ನ ಉಪಹಾರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರಿಗೆ ಮತ್ತು ಸಹಾಯಕ ಅಡುಗೆಯವರಿಗೆ ನೀಡಲಾಗುತ್ತಿರುವ ಮಾಸಿಕ ಗೌರವ ಸಂಭಾವನೆಯನ್ನು 1000 ರೂಗಳಷ್ಟು ಹೆಚ್ಚಿಸುವ ಬಗ್ಗೆ.**

**ಓದಲಾಗಿದೆ:**
1) 2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಘೋಷಣೆಯ ಕಂಡಿಕೆ-109.
2) ಸರ್ಕಾರದ ಆದೇಶ ಸಂಖ್ಯೆ: ಇಡಿ 22 ಎಂಎಂಎಸ್ 2022 ಬೆಂಗಳೂರು ದಿನಾಂಕ: 07.04.2022
3) ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 341 ವೆಚ್ಚ-8/2025 ದಿನಾಂಕ:11.04.2025.
4) ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಎಎ3/ ಪಿ.ಎಂ ಪೋಷಣ್-ಮ.ಉ.ಯೋ./ಅ.ಘೋ/ ಇ-1732364/1/2025-26 ದಿನಾಂಕ: 29.04.2025.
5) ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 414 ವೆಚ್ಚ-8/2025 ದಿನಾಂಕ: 15.05.2025.

**********************

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ-1ರ 2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-109ರಲ್ಲಿ ಕೆಳಕಂಡಂತೆ ಘೋಷಿಸಲಾಗಿದೆ.

**"ಸರ್ಕಾರಿ ಶಾಲೆಗಳಲ್ಲಿ ಬಿಸಿಯೂಟ ತಯಾರಿಸುವ ಸಿಬ್ಬಂದಿಗೆ ನೀಡುತ್ತಿರುವ ಮಾಸಿಕ ಗೌರವಧನವನ್ನು ತಲಾ 1,000 ರೂ. ಹೆಚ್ಚಿಸಲಾಗುವುದು."**

ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶದಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರು ಹಾಗೂ ಸಹಾಯಕ ಅಡುಗೆಯವರಿಗೆ ನೀಡಲಾಗುವ ಮಾಸಿಕ ಗೌರವ ಸಂಭಾವನೆಯನ್ನು 2022-23ನೇ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ತಲಾ **ರೂ 1000/- (ಒಂದು ಸಾವಿರ ರೂಪಾಯಿಗಳು ಮಾತ್ರ)** ಗಳಷ್ಟು ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ಆರ್ಥಿಕ ಇಲಾಖೆ ಅನಧಿಕೃತ ಟಿಪ್ಪಣಿಯಲ್ಲಿ (**Budget Advice**) 2025-26ನೇ ಸಾಲಿನ ಆಯವ್ಯಯ ಕಂಡಿಕೆ-109ರ ಘೋಷಣೆಯನ್ನು ಮುಂದುವರೆದ ಮಾರ್ಪಾಡಿತ ಯೋಜನೆಯೆಂದು ಪರಿಗಣಿಸಲಾಗಿದ್ದು, ಸದರಿ ಕಂಡಿಕೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅಗತ್ಯವಿರುವ ಅನುದಾನವನ್ನು ರಾಜ್ಯ ಯೋಜನೆ ಕ್ಷೀರಭಾಗ್ಯ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ: 2202-00-101-0-18 (2202-01-196-1-02) ಯ ಉಪ ಶೀರ್ಷಿಕೆ: 324 ರಡಿ ನಿಗದಿಯಾಗಿರುವ ರೂ.41206.31 ಲಕ್ಷಗಳ

prabhavaa.com